# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು-560 002**

***ಪತ್ರಿಕಾ ಪ್ರಕಟಣೆ*** **ದಿನಾಂಕ: 30.09.2011**

## ***ಪಾಲಿಕೆಯ ಕಾ.ಪಾ.ಅ-ಬಸವನಗುಡಿ ವಿಭಾಗ ಕಛೇರಿ ಸ್ಥಳಾಂತರ***

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಕಾರ್ಯಪಾಲಕ ಅಭಿಯಂತರರು (ಬಸವನಗುಡಿ) ವಿಭಾಗ ಕಛೇರಿಯು ಹಾಲಿ ಜಯನಗರ 2ನೇ ಬ್ಲಾಕ್, ಸೌತ್ ಎಂಡ್ ವೃತ್ತದಲ್ಲಿ ಇದುವರೆವಿಗೂ ಕಾರ್ಯನಿರ್ವಹಿಸುತ್ತಿದ್ದು, ಈಗ ಈ ಕಛೇರಿಯನ್ನು ಚೆನ್ನಮ್ಮನಕೆರೆ ಅಚ್ಚುಕಟ್ಟು ಪ್ರದೇಶದಲ್ಲಿರುವ ನಗರ ಪಾಲಿಕೆ ಕಟ್ಟಡಕ್ಕೆ ಸ್ಥಳಾಂತರಿಸಲಾಗಿದೆ. ಸದರಿ ಕಛೇರಿಯು ದಿನಾಂಕ: 29.09.2011 ರಿಂದ ಕಾರ್ಯನಿರ್ವಹಿಸುತ್ತಿದೆ ಎಂದು ಕಾರ್ಯಪಾಲಕ ಅಭಿಯಂತರರು (ಬಸವನಗುಡಿ) ವಿಭಾಗ ರವರು ತಿಳಿಸಿರುತ್ತಾರೆ. ಸಂಬಂಧಪಟ್ಟ ಸಾರ್ವಜನಿಕರು ಇನ್ನು ಮುಂದೆ ಸ್ಥಳಾಂತರಗೊಂಡಿರುವ ಕಛೇರಿಯನ್ನು ತಮ್ಮ ಕೆಲಸ ಕಾರ್ಯಗಳಿಗೆ ಸಂಪರ್ಕಿಸಲು ಕೋರಿದೆ.

**ಸಾರ್ವಜನಿಕ ಸಂಪರ್ಕಾಧಿಕಾರಿ**

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು-560 002**

***ಪತ್ರಿಕಾ ಪ್ರಕಟಣೆ*** **ದಿನಾಂಕ: 30.09.2011**

## *ಗಾಂಧಿ ಜಯಂತಿ ಹಬ್ಬದ ಪ್ರಯುಕ್ತ ಮಾಂಸ ಮಾರಾಟ ನಿಷೇಧ*

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ದಿನಾಂಕ: 02.10.2011ರ ಭಾನುವಾರ ***"ಗಾಂಧಿ ಜಯಂತಿ"*** ಹಬ್ಬದ ಪ್ರಯುಕ್ತ ಪ್ರಾಣಿಗಳ ವಧೆ ಮತ್ತು ಮಾಂಸ ಮಾರಾಟ ನಿಷೇಧಿಸಲಾಗಿದೆ ಎಂದು ಜಂಟಿ ನಿರ್ದೇಶಕರು (ಪಶುಪಾಲನೆ) ರವರು ತಿಳಿಸಿದ್ದಾರೆ.

**ಸಾರ್ವಜನಿಕ ಸಂಪರ್ಕಾಧಿಕಾರಿ**

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು-560 002**

***ಪತ್ರಿಕಾ ಪ್ರಕಟಣೆ*** **ದಿನಾಂಕ: 30.09.2011**

## ***ಆಸ್ತಿ ತೆರಿಗೆ ಬಾಕಿ ಉಳಿಸಿಕೊಂಡಿದ್ದ ಮಾಲೀಕರ ಮನೆ ಎದುರುಗಡೆ ತಮಟೆ ಬಾರಿಸುವ ಕಾರ್ಯಕ್ರಮ***

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಆಯುಕ್ತರು ಆಸ್ತಿ ತೆರಿಗೆ ಬಾಕಿ ಇರುವ ತೆರಿಗೆದಾರರಿಗೆ ನೋಟಿಸ್‌ಗಳನ್ನು ಜಾರಿ ಮಾಡಿ ದಂಡ ಸಮೇತ ವಸೂಲಿ ಮಾಡಲು ಕಾರ್ಯಕ್ರಮಗಳನ್ನು ರೂಪಿಸಿ ಅಗತ್ಯವಿದ್ದಲ್ಲಿ ಜಪ್ತಿ ವಾರಂಟ್‌ಗಳನ್ನು ಜಾರಿ ಮಾಡಿ ತೆರಿಗೆ ವಸೂಲಿ ಮಾಡಲು ವಲಯ ಜಂಟಿ ಆಯುಕ್ತರು ಹಾಗೂ ಉಪ ಆಯುಕ್ತರುಗಳಿಗೆ ಆದೇಶಿಸಿರುತ್ತಾರೆ.

ದಿನಾಂಕ: 29.09.2011 ರಂದು ತಮಟೆ ಹೊಡೆಯುವ ಕಾರ್ಯಕ್ರಮವನ್ನು ಮುಂದುವರೆಸಿ, ಸಹಾಯಕ ಕಂದಾಯ ಅಧಿಕಾರಿ (ಲಕ್ಷ್ಮಿದೇವಿನಗರ) ಉಪ ವಿಭಾಗದ ವ್ಯಾಪ್ತಿಯಲ್ಲಿ ಬರುವ ವಾರ್ಡ್ ನಂ.38, ಪೀಣ್ಯ 1ನೇ ಹಂತ, ಕೆ.ಐ.ಎ.ಡಿ.ಬಿ. 2ನೇ ಮುಖ್ಯರಸ್ತೆ ಸ್ವತ್ತಿನ ಸಂಖ್ಯೆ: 10/ಬಿ ಗೆ ದಿನಾಂಕ: 10.09.2007 ರಲ್ಲಿ (ಹನುಮಾನ್ ವೀವಿಂಗ್ ಫ್ಯಾಕ್ಟರಿ) ಅನುಭವದಾರರ ಹೆಸರಿನಲ್ಲಿ ಖಾತೆಯನ್ನು ನೋಂದಾಯಿಸಿ ದಿನಾಂಕ: 01.04.2001 ರಿಂದ 2007-08ರ ವರೆಗೆ ಒಟ್ಟು 42,16,782/- ರೂ.ಗಳ ಕಂದಾಯವನ್ನು ಪಾವತಿಸಲು ವಿಶೇಷ ಸೂಚನಾ ಪತ್ರವನ್ನು ನೀಡಲಾಗಿತ್ತು.

ಸದರಿ ಕಂದಾಯದ ಮೊತ್ತವನ್ನು ಪಾವತಿಸದೇ ಇದ್ದ ಕಾರಣ ಹಲವಾರು ನೋಟಿಸ್‌ಗಳನ್ನು ಜಾರಿ ಮಾಡಿದ್ದರೂ ಕೂಡಾ ಆಸ್ತಿ ತೆರಿಗೆ ಪಾವತಿಸಿರುವುದಿಲ್ಲ. ಆದಕಾರಣ ವಿಶೇಷ ಸೂಚನಾ ಪತ್ರದಲ್ಲಿ ಸೂಚಿಸಿರುವಂತೆ ಒಟ್ಟು ರೂ.42,16,782 ಕ್ಕೆ ಮತ್ತು ಈ ತಹಲ್‌ವರೆಗಿನ ಬಡ್ಡಿ ರೂ.7,86,668/- ಗಳು ಸೇರಿ ಒಟ್ಟು ಮೊತ್ತ ರೂ.50,03,450/- ರೂ.ಗಳನ್ನು ಪಾವತಿಸದೇ ಬಾಕಿ ಉಳಿಸಿಕೊಂಡಿದ್ದರಿಂದ ದಿನಾಂಕ: 29.09.2011 ರಂದು ಕಟ್ಟಡದ ಎದುರುಗಡೆ ತಮಟೆ ಹೊಡೆಯುವ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು. ಆಸ್ತಿ ಮಾಲೀಕರು ರೂ.10,00,000/- ಗಳ ಚೆಕ್‌ನ್ನು ನೀಡಿ, ಉಳಿಕೆ ಮೊತ್ತವನ್ನು ಪಾವತಿಸಲು ಒಂದು ತಿಂಗಳ ಕಾಲಾವಕಾಶ ಹಾಗೂ ಅಪೀಲ್ ಮುಗಿದ ಕೂಡಲೇ ಪಾವತಿಸುವುದಾಗಿ ತಿಳಿಸಿರುತ್ತಾರೆ.

ಬಾಕಿ ಉಳಿಸಿಕೊಂಡಿರುವ ಆಸ್ತಿ ತೆರಿಗೆಯನ್ನು ಪಾವತಿಸಲು ಆಸ್ತಿ ಮಾಲೀಕರಿಗೆ ಸಾಕಷ್ಟು ಕಾಲಾವಕಾಶ ನೀಡಲಾಗಿದೆ. ಆದರೂ ಕೆಲವರು ತೆರಿಗೆ ಪಾವತಿಸದೇ ಬಾಕಿ ಉಳಿಸಿಕೊಂಡಿದ್ದಾರೆ. ಅಂತಹವರ ವಿರುದ್ಧ ಜಪ್ತಿ ವಾರಂಟ್ ಜಾರಿ ಮಾಡುವುದರ ಜೊತೆಗೆ ಅವರ ಮನೆ ಎದುರು ತಮಟೆ ಹೊಡೆಯುವ ಕಾರ್ಯ ಮುಂದುವರೆಸಲಾಗುವುದೆಂದು ಆಯುಕ್ತರು ಆಸ್ತಿ ತೆರಿಗೆ ಬಾಕಿ ಉಳಿಸಿಕೊಂಡಿದ್ದ ಮಾಲೀಕರಿಗೆ ಎಚ್ಚರಿಕೆ ನೀಡಿದ್ದಾರೆ.

**ಸಾರ್ವಜನಿಕ ಸಂಪರ್ಕಾಧಿಕಾರಿ**